ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಸರ್ಕಾರಿ ಆಸ್ಪತ್ರೆಯ ಹೆಚ್ಚುವರಿ ಕಟ್ಟಡ ನಿರ್ಮಾಣ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

82 (70) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಸರ್ಕಾರಿ ಆಸ್ಪತ್ರೆಯ ಹೆಚ್ಚುವರಿ ಕಟ್ಟಡವನ್ನು ನಿರ್ಮಿಸಲು ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ;

(ಆ) ಸದರಿ ಕಟ್ಟಡ ಕಾಮಗಾರಿಗೆ ಹಣ ಬಿಡುಗಡೆ ಮಾಡಲಾಗಿದೆಯೇ; ಬಿಡುಗಡೆಯಾಗಿದ್ದಲ್ಲಿ, ಇದುವರೆಗೂ ಎಷ್ಟು ಹಣ ಬಿಡುಗಡೆಯಾಗಿದೆ;

(ಇ) ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ; ಹಾಗೂ ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು?